ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಕಲ್ಯಾಣ ಕರ್ನಾಟಕದಲ್ಲಿರುವ ಪ್ರಾಥಮಿಕ, ಪ್ರೌಢ ಮತ್ತು ಪದವಿ ಕಾಲೇಜುಗಳ ವಿವರ

ಡಾ: ಚಂದ್ರುಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ):-

624(731) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲ್ಯಾಣ ಕರ್ನಾಟಕದಲ್ಲಿರುವ ಸರ್ಕಾರಿ/ಅನುದಾನಿತ/ಅನುದಾನ ರಹಿತ ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು; ವಿದ್ಯಾರ್ಥಿಗಳ ಮತ್ತು ಶಿಕ್ಷಕರ ಅನುಪಾತ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಸದರಿ ಶಾಲೆಗಳಲ್ಲಿ ಶಿಕ್ಷಕರ ಮತ್ತು ವಿದ್ಯಾರ್ಥಿಗಳ ಅನುಪಾತ ತುಂಬಾ ಕಡಿಮೆ ಇದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು?